## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 19 ಇಎಸ್‌ಟಿ(10) 2014

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು.
ದಿನಾಂಕ: 07-11-2014.

### ಜ್ಞಾಪನ

ವಿಷಯ: ಡಾ॥ ಕಿರಣ್‌ಕುಮಾರ್ ಬಿ.ವಿ. ಮತ್ತು ಇತರ ಸಹಾಯಕ ಪ್ರಾಧ್ಯಾಪಕರು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಸಲ್ಲಿಸಿರುವ ಅರ್ಜಿಗೆ ನೀಡಿರುವ ತೀರ್ಪಿನಲ್ಲಿ ಕ್ರಮಕೈಗೊಳ್ಳುವ ಬಗ್ಗೆ.

ಉಲ್ಲೇಖ
1. ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ: 151 ರಿಂದ 206/2014ರಲ್ಲಿ ದಿನಾಂಕ: 16.09.2014 ರಂದು ನೀಡಿರುವ ತೀರ್ಪು.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 14 ಟಿಜಿಎಲ್ 2014 ದಿ: 09.10.2014.
3. ನಿರ್ದೇಶನಾಲಯ ಹಿಂಬರಹ ಸಂಖ್ಯೆ: ಡಿಟಿಇ 19 ಎಸ್‌ಟಿ(10) 2014, ದಿನಾಂಕ: 09.10.2014.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ನೇಮಕಗೊಂಡಿದ್ದು, ತದನಂತರ ಎಐಸಿಟಿಇ 6ನೇ ಪರಿಷ್ಕೃತ ವೇತನ ಶ್ರೇಣಿಯಲ್ಲಿರುವ ಸದರಿ ಸಹಾಯಕ ಪ್ರಾಧ್ಯಾಪಕರ ಹುದ್ದೆಯನ್ನು ಸಹ ಪ್ರಾಧ್ಯಾಪಕರಾಗಿ ಮರುಪದನಾಮಿಕರಿಸಿದ ಹಿನ್ನಲೆಯಲ್ಲಿ ಕಾರವಾರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಹೊರತುಪಡಿಸಿ, ಉಳಿದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ 3 ವರ್ಷಕ್ಕಿಂತ ಕಡಿಮೆ ಸೇವಾವಧಿ ಇದ್ದರು ಸಹ ಹೆಚ್ಚುವರಿ ವೇತನವನ್ನು ಡ್ರಾ ಮಾಡಿಕೊಂಡಿದ್ದು. ಈ ಹೆಚ್ಚುವರಿ ವೇತನವನ್ನು ಹಿಂಪಡೆಯಲು ಕ್ರಮಕೈಗೊಂಡ ಹಿನ್ನಲೆಯಲ್ಲಿ ಸದರಿ ಸಹಾಯಕ ಪ್ರಾಧ್ಯಾಪಕರು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 151 ರಿಂದ 206/2014, 513 ರಿಂದ 515, 657/2014, 1095 ರಿಂದ 1097/2014, 1232/2014 ಹಾಗೂ 1301 ರಿಂದ 1337/2014ರಲ್ಲಿ ಪ್ರಶ್ನಿಸಿದ್ದು, ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 16.09.2014 ರಂದು ತೀರ್ಪು ನೀಡಿರುತ್ತದೆ. ಈ ತೀರ್ಪಿನಲ್ಲಿ ಸರ್ಕಾರದ ಪತ್ರ ಸಂಖ್ಯೆ: 192 ಡಿಟಿಇ 2013 ದಿನಾಂಕ: 28.12.2013ರಲ್ಲಿ ಪಾವತಿಸಲಾಗಿರುವ ಹೆಚ್ಚುವರಿ ಸಂಬಳವನ್ನು ಹಿಂಪಡೆಯಲು ತೆಗೆದುಕೊಂಡ ಕ್ರಮವನ್ನು ಮಾನ್ಯ ಕರ್ನಾಟಕ ಆಡಳಿತ ಮಂಡಳಿಯು ಎತ್ತಿ ಹಿಡಿದಿರುತ್ತದೆ.

ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಆದೇಶದನ್ವಯ ಪರಿಶೀಲಿಸಿ ಜರೂರಾಗಿ ಹೆಚ್ಚುವರಿಯಾಗಿ ಪಾವತಿಸಿರುವ ಸಂಬಳದ ಮೊತ್ತವನ್ನು ವಸೂಲು ಮಾಡಲು ಮುಂದಿನ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ತೆಗೆದುಕೊಂಡ ಕ್ರಮದ ಬಗ್ಗೆ ವರದಿಯನ್ನು ಸರ್ಕಾರಕ್ಕೆ ನೀಡುವಂತೆ ಉಲ್ಲೇಖ(2)ರಲ್ಲಿ ಈಗಾಗಲೇ ನಿರ್ದೇಶಿಸಲಾಗಿದೆ.

ಸದರಿ ಸರ್ಕಾರದ ಪತ್ರವನ್ನು ಉಲ್ಲೇಖ(3)ರ ಹಿಂಬರದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ರವಾನಿಸುತ್ತಾ, ಸರ್ಕಾರದ ಪತ್ರದಲ್ಲಿ ಸೂಚಿಸಿರುವಂತೆ ಹೆಚ್ಚುವರಿಯಾಗಿ ಪಾವತಿಸಿರುವ ಸಂಬಳದ ಮೊತ್ತವನ್ನು ವಸೂಲು ಮಾಡಲು ಜರೂರು ಕ್ರಮ ತೆಗೆದುಕೊಂಡು ಕೂಡಲೇ ನಿರ್ದೇಶನಾಲಯಕ್ಕೆ ವರದಿ ಸಲ್ಲಿಸಲು ನಿರ್ದೇಶಿಸಲಾಗಿದೆ.

2, . .

ಈ ತೀರ್ಪಿನಲ್ಲಿ ಹಿನ್ನಲೆಯಲ್ಲಿ ಈ ಕಛೇರಿಯ ಸಮ ಸಂಖ್ಯೆಯ ಜ್ಞಾಪನ ದಿನಾಂಕ: 01.10.2014 ರಂದು ಶ್ರೀ ಜಿ.ನಿರಂಜನದಾಸ್ ರಾಜ್ಬಾನ್, ಜಂಟಿ ನಿರ್ದೇಶಕರು (ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಲಾಗಿದ್ದು, ಈ ತನಿಖಾ ತಂಡವು ಸಂಬಂಧಪಟ್ಟ ಎಲ್ಲಾ 09 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ತಪಾಸಣೆ ನಡೆಸಿ ದಿನಾಂಕ: 30.10.2014 ರಂದು ವರದಿಯನ್ನು ಸಲ್ಲಿಸಿರುತ್ತಾರೆ. ಈ ವರದಿಯಲ್ಲಿ ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ ಹೆಚ್ಚುವರಿಯಾಗಿ ಸಂದಾಯವಾಗಿರುವ ಹಣದ ವಿವರವನ್ನು ಸಲ್ಲಿಸಿರುತ್ತಾರೆ. ಈ ವಿವರವನ್ನು ಲಗತ್ತಿಸಿರುವ ಅನುಬಂಧದಲ್ಲಿ ನೀಡಲಾಗಿದ್ದು, ಕೂಡಲೇ ಸಂಬಂಧಪಟ್ಟ ಸಹಾಯಕ ಪ್ರಾಧ್ಯಾಪಕರಿಂದ ಹಣ ವಸೂಲು ಮಾಡಿ ದಿನಾಂಕ: 30.11.2014 ರೊಳಗೆ ಸರ್ಕಾರಕ್ಕೆ ಜಮಾ ಮಾಡಲು ಸಂಸ್ಥೆಯ ಪ್ರಾಚಾರ್ಯರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

**ನಿರ್ದೇಶಕರು**

**ಇವರಿಗೆ,**

1. ಪ್ರಾಚಾರ್ಯರು, ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಮಹಾವಿದ್ಯಾಲಯ, ಬೆಂಗಳೂರು.
2. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ.
3. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು.
4. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ.
5. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ.
6. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ.
7. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ.
8. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ.
9. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ.